# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 354 ಯುಎನ್ಇ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:31.12.2020.

MANGALORE UNIVERSITY
ಮಂಗಳೂರು ವಿಶ್ವವಿದ್ಯಾನಿಲಯ
Registrar's Office ಕುಲಸಚಿವರ ಕಛೇರಿ
07 JAN 2021
Regn No: 9092

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560 001.

ಇವರಿಗೆ:

1. ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು – 560 056.
2. ಕುಲಪತಿಗಳು, ಮೈಸೂರು ವಿಶ್ವವಿದ್ಯಾಲಯ, ಮೈಸೂರು – 570 005.
3. ಕುಲಪತಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ – 580 003.
4. ಕುಲಪತಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ – 577 451.
5. ಕುಲಪತಿಗಳು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ – 585 106
6. ಕುಲಪತಿಗಳು, ಮಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು – 560 056.
7. ಕುಲಪತಿಗಳು, ತುಮಕೂರು ವಿಶ್ವವಿದ್ಯಾಲಯ, ತುಮಕೂರು – 572 101.
8. ಕುಲಪತಿಗಳು, ಕನ್ನಡ ವಿಶ್ವವಿದ್ಯಾಲಯ, ಹಂಪಿ – 583 276.
9. ಕುಲಪತಿಗಳು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು – 570 006.
10. ಕುಲಪತಿಗಳು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ – 586 101.
11. ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
12. ಕುಲಪತಿಗಳು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಪತಿಗಳು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಪತಿಗಳು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಕುಲಪತಿಗಳು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು – 560 018.
16. ಕುಲಪತಿಗಳು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕುಲಪತಿಗಳು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಕುಲಪತಿಗಳು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.
19. ಕುಲಪತಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ.
20. ಕುಲಪತಿಗಳು, ರಾಯಚೂರು ವಿಶ್ವವಿದ್ಯಾಲಯ, ಯರಗೇರಾ, ರಾಯಚೂರು ಜಿಲ್ಲೆ.
21. ಕುಲಪತಿಗಳು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು.
22. ಕುಲಪತಿಗಳು, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ.
23. ಕುಲಪತಿಗಳು, ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು.

ಮಾನ್ಯರೆ,

ವಿಷಯ: ಕಾಲೇಜುಗಳ ಸಂಯೋಜನೆಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ನಿಗದಿತ ನಮೂನೆಯಲ್ಲಿ ಪರಿಪೂರ್ಣ ಮಾಹಿತಿಯೊಂದಿಗೆ ಅನುಮೋದನೆ ಕೋರಿ ಸರ್ಕಾರಕ್ಕೆ ಸಲ್ಲಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಪಮುಖ್ಯಮಂತ್ರಿ (ಉನ್ನತ ಶಿಕ್ಷಣ)...

ಹೊಸ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತಂತೆ ರಾಜ್ಯದ ವಿಶ್ವವಿದ್ಯಾಲಯಗಳಿಂದ ಸರ್ಕಾರಕ್ಕೆ ಸ್ವೀಕೃತವಾಗುತ್ತಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಿದಾಗ, ಸರ್ಕಾರವು ನಿಗದಿಪಡಿಸಿರುವ ಕನಿಷ್ಠ ವಿಸ್ತೀರ್ಣದ ಜಮೀನನ್ನು ಸಂಸ್ಥೆಯು ಹೊಂದಿದೆಯೇ, ಅದರ ವಿವರಗಳು, ಕಟ್ಟಡಗಳ ಸೌಲಭ್ಯ, ಸಂಸ್ಥೆಯ ಹಣಕಾಸಿನ ವಿವರಗಳ ಮಾಹಿತಿಯೊಂದಿಗೆ ನಿಗದಿತ ನಮೂನೆಯಲ್ಲಿ ಪ್ರಸ್ತಾವನ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿದ್ದರೂ ಸಂಯೋಜನೆಗೆ ಸಂಬಂಧಿಸಿದ ಪ್ರಸ್ತಾವನೆಗಳಲ್ಲಿನ ಪರಿಶೀಲನಾ ಪಟ್ಟಿಯಲ್ಲಿ ಸದರಿ ವಿವರಗಳನ್ನು ಪೂರ್ಣವಾಗಿ ನೀಡದೇ ಇರುವುದು ಕಂಡುಬಂದಿರುತ್ತದೆ.


ಇನ್ನು ಮುಂದೆ ಪರಿಶೀಲನಾ ಪಟ್ಟಿಯಲ್ಲಿ ಸಂಸ್ಥೆಯು ಹೊಂದಿರುವ ಜಮೀನಿನ ವಿಸ್ತೀರ್ಣವನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಸದರಿ ಜಮೀನು ಆಯಾ ಸಂಸ್ಥೆಯ ಹೆಸರಿನಲ್ಲಿ ಇರತಕ್ಕದ್ದು ಮತ್ತು ಬಾಡಿಗೆ, ಕರಾರು ಅಥವಾ ಲೀಸ್ ಮೇಲೆ ಇರತಕ್ಕದ್ದಲ್ಲ ಎಂಬುದನ್ನು ಖಚಿತಪಡಿಸಿಕೊಂಡಿರಬೇಕು. ಜಮೀನಿನ ವಿಸ್ತೀರ್ಣವು ಯುಜಿಸಿ ಮಾರ್ಗಸೂಚಿಯನ್ವಯ ಹಾಗೂ ರಾಜ್ಯ ಸರ್ಕಾರವು ನಿಗದಿಪಡಿಸಿದ ಕನಿಷ್ಠ ವಿಸ್ತೀರ್ಣವನ್ನು ಹೊಂದಿರಬೇಕು. ಸದರಿ ಕಟ್ಟಡದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ, ಇತರ ಚಟುವಟಿಕೆಗಳಿಗೆ ಅವಕಾಶ ಇರಬಾರದು.

ಮೇಲ್ಕಂಡ ಎಲ್ಲಾ ಅಂಶಗಳನ್ನು ಮತ್ತು ಅವಶ್ಯತೆಗಳನ್ನು ಪ್ರಸ್ತಾಪಿತ ಕಾಲೇಜು ಹೊಂದಿರುವುದನ್ನು ಖಚಿತಪಡಿಸಿಕೊಂಡು ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಬೇಕು. ಒಂದು ವೇಳೆ ಮೇಲ್ಕಂಡ ವಿಚಾರಗಳ ಬಗ್ಗೆ ಸ್ಪಷ್ಟವಾದ/ಪರಿಪೂರ್ಣವಾದ ಮಾಹಿತಿ ಇಲ್ಲದೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದಲ್ಲಿ, ಕಾರಣರಾದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಗುರುತಿಸಿ ಅಂತಹವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು.

ಆದ್ದರಿಂದ, ಸಂಯೋಜನೆಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸುವಾಗ ಸದರಿ ಕಾಲೇಜುಗಳು ಹೊಂದಿರುವ ಜಮೀನಿನ ಸ್ಪಷ್ಟ ಮಾಹಿತಿಯೊಂದಿಗೆ ಸ್ಥಳೀಯ ವಿಚಾರಣಾ ಸಮಿತಿಗಳು ನಿಗಡಿಪಡಿಸಿರುವ ನಮೂನೆಯಲ್ಲಿ ಮಾತ್ರ ಸಂಪೂರ್ಣವಾದ ವಿವರಗಳನ್ನು ದಾಖಲು ಮಾಡಿ ಸ್ಪಷ್ಟ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸುತ್ತಾ ಅಪೂರ್ಣವಾದ ಮತ್ತು ಅಪರಿಪೂರ್ಣ ಮಾಹಿತಿಗಳೊಂದಿಗೆ ಸಂಯೋಜನೆಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಕಳುಹಿಸಬಾರದಾಗಿ ಎಚ್ಚರಿಕೆ ನೀಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).



**ಡಾ: ಅಶ್ವಥ್ ನಾರಾಯಣ ಸಿ.ಎನ್.**
**ಉಪ ಮುಖ್ಯಮಂತ್ರಿಗಳು**
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಹಾಗೂ
ಜೀವನೋಪಾಯ ಇಲಾಖೆ)

ಕೊಠಡಿ ಸಂಖ್ಯೆ 242–243
2ನೇ ಮಹಡಿ, ವಿಕಾಸಸೌಧ
ಬೆಂಗಳೂರು – 560 001
ದೂರವಾಣಿ ಸಂಖ್ಯೆ : 080–22258965
: 080–22034647


ಸಂಖ್ಯೆ:ಉಮು/ಉಶಿ,ಐಟಿ&ಬಿಟಿ,ವಿ&ತಂ,ಕೌಅ/140/2019–20 ದಿನಾಂಕ: **08.12.2020**

E.no-2021702/2C
14/12/2020

**: ಟಿ ಪ್ಪ ಣಿ :**

ವಿವಿಧ ವಿಶ್ವವಿದ್ಯಾಲಯಗಳಿಂದ ಸಲ್ಲಿಕೆಯಾಗುತ್ತಿರುವ ಹೊಸ ಕಾಲೇಜುಗಳನ್ನು ಪ್ರಾರಂಭಿಸುವ ಬಗೆಗಿನ ಕಡತಗಳನ್ನು ಪರಿಶೀಲಿಸಿದಾಗ, ಸರ್ಕಾರವು ನಿಗದಿಪಡಿಸಿರುವ ಕನಿಷ್ಟ ವಿಸ್ತೀರ್ಣದ ಜಮೀನನ್ನು ಸದ್ರಿ ಸಂಸ್ಥೆಯು ಹೊಂದಿದೆಯೇ? ಅದರ ವಿವರಗಳು, ಕಟ್ಟಡಗಳ ಸೌಲಭ್ಯ, ಸದರಿ ಸಂಸ್ಥೆಯು ಹೊಂದಿರುವ ಹಣಕಾಸಿನ ಮೊತ್ತ ಇತ್ಯಾದಿಗಳ ಬಗ್ಗೆ ನಿಗದಿತ ನಮೂನೆಯಲ್ಲಿ ವಿವರಗಳನ್ನು ನೀಡಲು ಸೂಚಿಸಿದ್ದರೂ ಸಹ ಇಲಾಖೆಯಿಂದ ಸಲ್ಲಿಕೆಯಾಗುತ್ತಿರುವ ಪರಿಶೀಲನಾ ಪಟ್ಟಿಯಲ್ಲಿ (ಚೆಕ್ ಲಿಸ್ಟ್) ಈ ವಿವರಗಳನ್ನು ಪೂರ್ಣವಾಗಿ ನೀಡದಿರುವುದು ಕಂಡುಬಂದಿದೆ. ಅದೇ ರೀತಿ ಸದರಿ ಪರಿಶೀಲನಾ ಪಟ್ಟಿಯಲ್ಲಿ (ಚೆಕ್ ಲಿಸ್ಟ್) ಕೇಳಲಾದ ಇತರ ವಿವರಗಳನ್ನು ಸಹ ಪೂರ್ಣವಾಗಿ ಭರ್ತಿ ಮಾಡಿರುವುದಿಲ್ಲ.

ಇನ್ನು ಮುಂದೆ ಪರಿಶೀಲನಾ ಪಟ್ಟಿಯಲ್ಲಿ (ಚೆಕ್ ಲಿಸ್ಟ್) ಸಂಸ್ಥೆಯು ಹೊಂದಿರುವ ಜಮೀನಿನ ವಿಸ್ತೀರ್ಣವನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು ಹಾಗೂ ಈ ಜಮೀನು ಆಯಾ ಸಂಸ್ಥೆಯ ಹೆಸರಿನಲ್ಲಿ ಇರತಕ್ಕದ್ದು ಮತ್ತು ಬಾಡಿಗೆ ಕರಾರು ಅಥವಾ ಲೀಸ್ ಮೇಲೆ ಇರತಕ್ಕದ್ದಲ್ಲ ಎಂಬುದನ್ನು ಖಚಿತಪಡಿಸಿಕೊಂಡಿರಬೇಕು. ಜಮೀನಿನ ವಿಸ್ತೀರ್ಣವು ಯು.ಜಿ.ಸಿ. ಮಾರ್ಗಸೂಚಿಯನ್ವಯ ಮತ್ತು ರಾಜ್ಯ ಸರ್ಕಾರವು ನಿಗದಿಪಡಿಸಿದ ಕನಿಷ್ಟ ವಿಸ್ತೀರ್ಣವನ್ನು ಹೊಂದಿರತಕ್ಕದ್ದು. ಸದರಿ ಕಟ್ಟಡದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ ಇತರೆ ಚಟುವಟಿಕೆಗಳಿಗೆ ಅವಕಾಶ ಇರತಕ್ಕದ್ದಲ್ಲ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಮತ್ತು ಅವಶ್ಯಕತೆಗಳನ್ನು ಸದರಿ ಪ್ರಸ್ತಾಪಿತ ಕಾಲೇಜು ಹೊಂದಿರುವುದನ್ನು ಖಚಿತಪಡಿಸಿಕೊಂಡು ಈ ಕಚೇರಿಗೆ ಪ್ರಸ್ತಾವನೆಯನ್ನು ಕಳುಹಿಸತಕ್ಕದ್ದು. ಒಂದು ವೇಳೆ ಮೇಲ್ಕಂಡ ವಿಚಾರಗಳ ಬಗ್ಗೆ ಸ್ಪಷ್ಟವಾದ ಮಾಹಿತಿಯಿಲ್ಲದೆ ಕಡತಗಳನ್ನು ಈ ಕಚೇರಿಗೆ ಕಳುಹಿಸಿದಲ್ಲಿ ಇದಕ್ಕೆ ಕಾರಣರಾದ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಗುರುತಿಸಿ ಅಂಥಹವರ ವಿರುದ್ಧ ಪ್ರಧಾನ ಕಾರ್ಯದರ್ಶಿಗಳು ಶಿಸ್ತು ಕ್ರಮ ಕೈಗೊಳ್ಳತಕ್ಕದ್ದು.

ಎಲ್ಲಾ ವಿಶ್ವವಿದ್ಯಾಲಯಗಳ ರಿಜಿಸ್ಟ್ರಾರ್‌ಗಳಿಗೆ ಈ ಬಗ್ಗೆ ಸ್ಪಷ್ಟ ಸೂಚನೆಗಳನ್ನು ನೀಡಿ ಸಂಪೂರ್ಣವಾದ ಮತ್ತು ಸರಿಯಾದ ಮಾಹಿತಿಗಳನ್ನು ನೀಡದೆ ಕಡತವನ್ನು ಸರ್ಕಾರಕ್ಕೆ ಕಳುಹಿಸಬಾರದಾಗಿ ಎಚ್ಚರಿಕೆ ನೀಡತಕ್ಕದ್ದು.

ಸ್ಥಳೀಯ ವಿಚಾರಣಾ ಸಮಿತಿಗಳು ನಿಗದಿಪಡಿಸಿರುವ ನಮೂನೆಯಲ್ಲಿ ಮಾತ್ರ ಸಂಪೂರ್ಣವಾದ ವಿವರಗಳನ್ನು ದಾಖಲು ಮಾಡಿ ಶಿಫಾರಸ್ಸುಗಳನ್ನು ಕಳುಹಿಸುವಂತೆ ಸೂಚನೆ ನೀಡತಕ್ಕದ್ದು.

(ಡಾ|| ಅಶ್ವಥ್ ನಾರಾಯಣ ಸಿ.ಎನ್)

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,